ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **324**

ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 06-03-2020

ಕ್ರ ಸಂ.	ಪ್ರಶ್ನೆ	ಉತ್ತರ
(ಅ)	ಮಂಗಳೂರು ಪ್ರಾದೇಶಿಕ ಸಾರಿಗೆ ಇಲಾಖೆಗಳ ವ್ಯಾಪ್ತಿಯಲ್ಲಿ ಈ ಹಿಂದೆ ಆಯವ್ಯಯದಲ್ಲಿ ಘೋಷಿಸಲಾದ ಯೋಜನೆಗಳನ್ನು ಇನ್ನೂ ಅನುಷ್ಠಾನಗೊಳಿಸದಿರಲು ಕಾರಣವೇನು; (ವಿವರ ನೀಡುವುದು)	2013-14ನೇ ಸಾಲಿನ ಆಯವ್ಯಯದಲ್ಲಿ ಮಂಗಳೂರಿನಲ್ಲಿ ಭಾರಿ ವಾಹನ ಚಾಲಕರ ತರಬೇತಿ ಸಂಸ್ಥೆ ಮತ್ತು ಸ್ವಯಂಚಾಲಿತ ಚಾಲನಾ ಪರೀಕ್ಷಾ ಪಥವನ್ನು ಸ್ಥಾಪಿಸಲು ಘೋಷಿಸಲಾಗಿದೆ. ಎರಡು ಕಾಮಗಾರಿಗಳನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಇವರಿಗೆ ವಹಿಸಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.
(ಆ)	ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆಯಿಂದ "ಏಜೆಂಟ್‌ಗಳೇ" ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;	ಸಾರಿಗೆ ಇಲಾಖೆಯಲ್ಲಿ ದಿನಾಂಕ:01-02-2020 ರಂತೆ ಮಂಜೂರಾದ ಒಟ್ಟು 2812 ಹುದ್ದೆಗಳ ಪೈಕಿ 1397 ಕಾರ್ಯನಿರತ ಹುದ್ದೆಗಳಿದ್ದು, 1415 ಹುದ್ದೆಗಳು ಖಾಲಿ ಇರುತ್ತವೆ. ಇದರಿಂದಾಗಿ ಇಲಾಖೆಯು ತೀವ್ರತರ ಅಧಿಕಾರಿ/ ಸಿಬ್ಬಂದಿ ಕೊರತೆಯನ್ನು ಎದುರಿಸುತ್ತಿದೆ. ಆದಾಗ್ಯೂ ಪ್ರಸ್ತುತ ಲಭ್ಯವಿರುವ ಅಧಿಕಾರಿ/ಸಿಬ್ಬಂದಿ ವರ್ಗದವರಿಂದ ಹಾಗೂ ಕಿಯೋನಿಕ್ಸ್ ಮತ್ತು ಇತರೆ ಏಜೆನ್ಸಿ ವತಿಯಿಂದ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿ ಸೇವೆಯನ್ನು ಪಡೆದು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕೆಲಸಗಳನ್ನು ನಿರ್ವಹಿಸಲಾಗುತ್ತಿದೆ. ಸಾರ್ವಜನಿಕರು ಮಧ್ಯವರ್ತಿಗಳನ್ನು ಸಂಪರ್ಕಿಸದೇ ನೇರವಾಗಿ ಕಛೇರಿಯ ಅಧಿಕಾರಿ/ ಸಿಬ್ಬಂದಿಯವರನ್ನು ಭೇಟಿ ಮಾಡಿ ಅವರ ಕೆಲಸಗಳನ್ನು ಮಾಡಿಸಿಕೊಳ್ಳಬೇಕೆಂದು ಕಛೇರಿಯ ಆವರಣದಲ್ಲಿ ಸೂಚನಾ ಫಲಕಗಳನ್ನು ಹಾಕಲಾಗಿದೆ. ಅಲ್ಲದೆ, ಸಾರ್ವಜನಿಕರಿಗೆ ಅವರುಗಳ ವಾಹನ ಅನುಜ್ಞಾ ಪತ್ರ ಮತ್ತು ವಾಹನ ನೋಂದಣಿಯ ಸ್ಮಾರ್ಟ್ ಕಾರ್ಡ್‌ಗಳನ್ನು ಅವರ ಮನೆಯ ವಿಳಾಸಗಳಿಗೆ ಅಂಚೆ ಸೇವೆಯ ಮೂಲಕ ತಲುಪಿಸಲಾಗುತ್ತಿದೆ. ಇಲಾಖೆಯಲ್ಲಿ ವಾಹನ್-4, ಸಾರಥಿ-4 ಮತ್ತು ಇ-ಪೇಮೆಂಟ್ ಆಫ್ ಟ್ಯಾಕ್ಸ್ ನಂತಹ ಆನ್‌ಲೈನ್ ಸೇವೆಗಳನ್ನು ರಾಜ್ಯದ ಎಲ್ಲಾ ಕಛೇರಿಗಳಲ್ಲಿ ಜಾರಿಗೆ ತರಲಾಗಿದೆ ಹಾಗೂ ಸಾರ್ವಜನಿಕರು ಕರ್ನಾಟಕ-1, ಬೆಂಗಳೂರು-1 ಮತ್ತು ಮೊಬೈಲ್-1 ಎಂಬ ಆ್ಯಪ್‌ಗಳಲ್ಲಿ ವಾಹನ ವಿವರ/ಮಾಹಿತಿಗಳನ್ನು ಪಡೆಯಬಹುದಾಗಿರುತ್ತದೆ.

--2

<table>
<tr><td>(ಇ)</td><td>ಸಾರಿಗೆ ಇಲಾಖೆಯಿಂದ ವಾರ್ಷಿಕ ಸರ್ಕಾರಕ್ಕೆ ಬರುವ ಆದಾಯವೆಷ್ಟು; (ವಿವರ ಒದಗಿಸುವುದು)</td><td>ಸಾರಿಗೆ ಇಲಾಖೆಯ ಕಳೆದ ಐದು ವರ್ಷಗಳ ರಾಜಸ್ವ ಸಂಗ್ರಹಣೆಯ ವಿವರಗಳು ಈ ಕೆಳಕಂಡಂತಿದೆ.
<table>
<tr><th>ವರ್ಷ</th><th>ರಾಜಸ್ವ ಗುರಿ</th><th>ವಸೂಲಾದ ರಾಜಸ್ವ</th></tr>
<tr><td>2014–15</td><td>3984.00</td><td>4145.00</td></tr>
<tr><td>2015–16</td><td>4397.07</td><td>4608.58</td></tr>
<tr><td>2016–17</td><td>5026.78</td><td>5262.41</td></tr>
<tr><td>2017–18</td><td>5561.62</td><td>5954.03</td></tr>
<tr><td>2018–19</td><td>6167.61</td><td>6205.93</td></tr>
<tr><td>2019–20 (ಫೆಬ್ರುವರಿ–2020ರ ಮಾಹೆಯವರೆಗೆ)</td><td>6051.80</td><td>5798.25</td></tr>
</table>
</td></tr>
<tr><td>(ಈ)</td><td>ಮಂಗಳೂರು ನಗರದಲ್ಲಿರುವ ಪ್ರಾದೇಶಿಕ ಸಾರಿಗೆ ಅಧಿಕಾರಿಯವರ ಕಛೇರಿ ಮತ್ತು ಇತರ ಕಛೇರಿಗಳನ್ನು ನಗರದ ಹೊರವಲಯಕ್ಕೆ ಸ್ಥಳಾಂತರಿಸಲು ನಿರ್ಣಯಿಸಲಾಗಿದ್ದರೂ ಕ್ರಮ ಕೈಗೊಳ್ಳದೇ ಇರಲು ಕಾರಣವೇನು: (ವಿವರ ಒದಗಿಸುವುದು)</td><td>ಮಂಗಳೂರು ನಗರದಲ್ಲಿರುವ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಯು ಸ್ವಂತ ಕಟ್ಟಡವಾಗಿದ್ದು, ಅಲ್ಲಿಯೇ ಕಾರ್ಯನಿರ್ವಹಿಸಲಾಗುತ್ತಿದೆ. ಈ ಕಛೇರಿಯನ್ನು ಸ್ಥಳಾಂತರಿಸುವ ಪ್ರಸ್ತಾವನೆ ಇರುವುದಿಲ್ಲ.</td></tr>
</table>

ಟಿಡಿ 13 ಟಿಡಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು